# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1976 [2173] |
| ಸದಸ್ಯರ ಹೆಸರು | : | ಶ್ರೀ ಪಿ. ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 26-03-2026 |
| ಉತ್ತರಿಸುವ ಸಚಿವರು | : | ಮಾನ್ಯ ಉಪ ಮುಖ್ಯಮಂತ್ರಿ |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದ ನೀರಾವರಿ ಯೋಜನೆಗಳಲ್ಲಿ ಕೃಷ್ಣ ಮೇಲ್ದಂಡೆ ಯೋಜನೆಯು ಅತ್ಯಂತ ಪ್ರಮುಖವಾಗಿದ್ದು, ಇಲ್ಲಿಯವರೆಗೆ ಶೇ. 50 ರಷ್ಟು ಈ 60 ವರ್ಷಗಳ ಅವಧಿಯಲ್ಲಿ ಸಾಧನೆ ಮಾಡಲಾಗಿಲ್ಲ ಎಂಬುದು ನಿಜವೇ; | ಕೃಷ್ಣಾ ಮೇಲ್ದಂಡೆ ಯೋಜನೆ ಹಂತ-1 & 2 ರ ಅನುಷ್ಠಾನಕ್ಕೆ ಕೃಷ್ಣಾ ನ್ಯಾಯಾಧೀಕರಣ-1 (ಬಚಾವತ ತೀರ್ಪು) ರನ್ವಯ 173.00 ಟಿ.ಎಂ.ಸಿ. ನೀರಿನ ಹಂಚಿಕೆ ಆಗಿರುತ್ತದೆ. ಸದರಿ ನೀರಿನ ಬಳಕೆಗೆ ಆಲಮಟ್ಟಿ (ನೀರಿನ ಸಂಗ್ರಹಣೆ ಮಟ್ಟ ಆರ್.ಎಲ್.519.60 ಮೀ.) ಹಾಗೂ ನಾರಾಯಣಪುರ ಜಲಾಶಯಗಳಡಿ ನೀರಿನ ಸಂಗ್ರಹಣೆಯಿಂದ ಉತ್ತರ ಕರ್ನಾಟಕದ ಕಲಬುರಗಿ, ಯಾದಗಿರಿ, ವಿಜಯಪುರ, ಬಾಗಲಕೋಟೆ ಹಾಗೂ ರಾಯಚೂರು ಜಿಲ್ಲೆಗಳಡಿಯ ಒಟ್ಟು 6.22 ಲಕ್ಷ ಹೆಕ್ಟೇರ್ ಕ್ಷೇತ್ರಕ್ಕೆ ನೀರಾವರಿ ಸೌಲಭ್ಯ ಕಲ್ಪಿಸುವುದಾಗಿರುತ್ತದೆ. ಪ್ರಸ್ತುತ ಯೋಜನೆಯು ಪೂರ್ಣಗೊಂಡಿದ್ದು, 6.20 ಲಕ್ಷ ಹೆಕ್ಟೇರ್ ಕ್ಷೇತ್ರಕ್ಕೆ ನೀರಾವರಿ ಸೌಲಭ್ಯ ಕಲ್ಪಿಸಲಾಗಿದೆ.<br><br>ಕೃಷ್ಣಾ ಮೇಲ್ದಂಡೆ ಯೋಜನೆ ಹಂತ-1 ಮತ್ತು ಹಂತ-2ರಲ್ಲಿ ಆಲಮಟ್ಟಿ ಜಲಾಶಯದ ಹಿನ್ನೀರಿನಲ್ಲಿ 136 ಗ್ರಾಮಗಳು ಮುಳುಗಡೆಯಾಗುತ್ತಿದ್ದು, ಸದರಿ ಗ್ರಾಮಗಳನ್ನು ಸ್ಥಳಾಂತರಿಸಲು 102 ಪುನರ್‌ವಸತಿ ಕೇಂದ್ರಗಳನ್ನು ನಿರ್ಮಿಸಲಾಗಿದೆ ಮತ್ತು ನಾರಾಯಣಪುರ ಜಲಾಶಯದ ಹಿನ್ನೀರಿನಲ್ಲಿ 40 ಗ್ರಾಮಗಳು ಮುಳುಗಡೆಯಾಗಿದ್ದು, ಸದರಿ ಗ್ರಾಮಗಳನ್ನು ಸ್ಥಳಾಂತರಿಸಲು 34 ಪುನರ್‌ವಸತಿ ಕೇಂದ್ರಗಳನ್ನು ನಿರ್ಮಿಸಲಾಗಿದೆ. ಅಲ್ಲದೇ ಮುಳುಗಡೆಗಾಗಿ, ಪುನರ್ ವಸತಿ ಕೇಂದ್ರಗಳ ನಿರ್ಮಾಣಕ್ಕಾಗಿ, ಕಾಲುವೆ ಜಾಲದ ನಿರ್ಮಾಣಕ್ಕಾಗಿ ಒಟ್ಟು 2,73,798 ಎಕರೆ ಜಮೀನು ಮತ್ತು 78854 ಕಟ್ಟಡ/ ಆಸ್ತಿಗಳನ್ನು ಸ್ವಾಧೀನ ಪಡಿಸಿಕೊಳ್ಳಲಾಗಿದೆ.<br><br>ಕೃಷ್ಣಾ ಮೇಲ್ದಂಡೆ ಯೋಜನೆ ಹಂತ-3ಕ್ಕೆ ದಿನಾಂಕ:30.12.2010ರ ಕೃಷ್ಣಾ ನ್ಯಾಯಾಧೀಕರಣ-2ರ ತೀರ್ಪಿನನ್ವಯ ಹಂಚಿಕೆಯಾದ 130 ಟಿ.ಎಂ.ಸಿ ನೀರಿನ ಬಳಕೆಗಾಗಿ ಆಲಮಟ್ಟಿ ಜಲಾಶಯದ ನೀರಿನ ಸಂಗ್ರಹಣೆ ಮಟ್ಟ ಆರ್.ಎಲ್ 519.60 ಮೀಟರ್‌ನಿಂದ 524.256 ಮೀಟರ್‌ವರೆಗೆ (15 ಅಡಿ) ಎತ್ತರಿಸುವುದು ಒಳಗೊಂಡಿರುತ್ತದೆ. |

| | | |
|---|---|---|
| | | ಉತ್ತರ ಕರ್ನಾಟಕದ ವಿಜಯಪುರ, ಬಾಗಲಕೋಟೆ, ಕಲಬುರಗಿ, ಯಾದಗಿರಿ, ರಾಯಚೂರು, ಕೊಪ್ಪಳ ಹಾಗೂ ಗದಗ ಜಿಲ್ಲೆಗಳಡಿ ಹೆಚ್ಚುವರಿಯಾಗಿ ಹಂತ-3ರಡಿ ಒಟ್ಟು 5.94 ಲಕ್ಷ ಹೆಕ್ಟೇರ್ (14.68 ಲಕ್ಷ ಎಕರೆ) ಅಚ್ಚುಕಟ್ಟು ಪ್ರದೇಶಗಳಿಗೆ ನೀರಾವರಿ ಸೌಲಭ್ಯ ಕಲ್ಪಿಸುವುದಾಗಿರುತ್ತದೆ. ಯೋಜನೆಯಡಿ ಪ್ರಸ್ತುತ 9 ಉಪಯೋಜನೆ ಕಾಮಗಾರಿಗಳು ಪ್ರಗತಿಯಲ್ಲಿದ್ದು, 1.52 ಲಕ್ಷ ಹೆಕ್ಟೇರ್ ಅಚ್ಚುಕಟ್ಟು ಕ್ಷೇತ್ರಕ್ಕೆ ನೀರಾವರಿ ಸಾಮರ್ಥ್ಯ ಸೃಜಿಸಲಾಗಿದೆ.<br><br>ಕೃಷ್ಣಾ ಮೇಲ್ದಂಡೆ ಯೋಜನೆ ಹಂತ-3 ರಲ್ಲಿ ಮುಳುಗಡೆಯಾಗುವ ಜಮೀನು, ಪುನರ್‌ವಸತಿ ಕೇಂದ್ರ ನಿರ್ಮಾಣಕ್ಕಾಗಿ ಮತ್ತು ಕಾಲುವೆ ಜಾಲದ ನಿರ್ಮಾಣಕ್ಕಾಗಿ ಒಟ್ಟು 1,33,867 ಎಕರೆ ಜಮೀನಿನ ಪೈಕಿ 29795 ಎಕರೆ ಕ್ಷೇತ್ರವನ್ನು ಭೂಸ್ವಾಧೀನಪಡಿಸಿಕೊಳ್ಳಲಾಗಿದೆ.<br><br>ಸರ್ಕಾರದ ಆದೇಶ ಸಂಖ್ಯೆ:ಜಸಂಇ 93 ಕೆಬಿಎನ್ 2025, ದಿನಾಂಕ:09-10-2025 ರನ್ವಯ ಕೃಷ್ಣಾ ಮೇಲ್ದಂಡೆ ಯೋಜನೆ ಹಂತ-3ರಡಿ ಒಪ್ಪಂದದ ಐತೀರ್ಪಿನನ್ವಯ ಜಮೀನುಗಳನ್ನು ಭೂಸ್ವಾಧೀನ ಪಡಿಸಿಕೊಳ್ಳಲು ಒಪ್ಪಂದದ ದರ ನಿಗದಿಪಡಿಸಿ ಆದೇಶಿಸಿದ್ದು, ಮುಳುಗಡೆ ಜಮೀನಿಗಾಗಿ ಖುಷ್ಕಿ ಜಮೀನಿಗೆ ಪ್ರತಿ ಎಕರೆಗೆ ರೂ. 30.00 ಲಕ್ಷ ಮತ್ತು ನೀರಾವರಿ ಜಮೀನಿಗೆ ಪ್ರತಿ ಎಕರೆಗೆ ರೂ. 40.00 ಲಕ್ಷ ಹಾಗೂ ಕಾಲುವೆ ನಿರ್ಮಾಣಕ್ಕಾಗಿ ಖುಷ್ಕಿ ಜಮೀನಿಗೆ ಪ್ರತಿ ಎಕರೆಗೆ ರೂ. 25.00 ಲಕ್ಷ ಹಾಗೂ ನೀರಾವರಿ ಜಮೀನಿಗೆ ಪ್ರತಿ ಎಕರೆಗೆ ರೂ.30.00 ದಂತೆ ಒಪ್ಪಂದದ ಐತೀರ್ಪಿಗೆ ದರ ನಿಗದಿಪಡಿಸಿ ಆದೇಶಿಸಿದ್ದು, ಅದರಂತೆ ಭೂಸ್ವಾಧೀನಪಡಿಸಿಕೊಳ್ಳಬೇಕಾದ ಜಮೀನುಗಳನ್ನು ಭೂಸ್ವಾಧೀನಪಡಿಸಿಕೊಳ್ಳಲು ಕ್ರಮ ಕೈಗೊಳ್ಳಲಾಗುತ್ತಿದೆ. |
| (ಆ) | ಸಂತ್ರಸ್ತರ ಪುನರ್ವಸತಿ, ಪುನರ್ ನಿರ್ಮಾಣ ಕಾರ್ಯಗಳು ಕೂಡಾ ಆಮೆಗತಿಯಲ್ಲಿ ಸಾಗುತ್ತಿದ್ದು, ಕೃಷ್ಣಾ ಮೇಲ್ದಂಡೆ ಯೋಜನೆ (ಯುಕೆಪಿ) ಭೂಸ್ವಾಧೀನ, ಪುನರ್ವಸತಿ ಮತ್ತು ಪುನರ್ ನಿರ್ಮಾಣ (ಆರ್ & ಆರ್) ಆಯುಕ್ತರ ಹುದ್ದೆ ಸೇರಿದಂತೆ ಜವಾನರವರೆಗೂ ಬಹುಪಾಲು ಹುದ್ದೆಗಳಲ್ಲಿ ಪ್ರಭಾರಿಗಳೇ ಕಾರ್ಯನಿರ್ವಹಿಸುತ್ತಿದ್ದು, ಇದರಿಂದ ಸಂತ್ರಸ್ತರು ಖಾಯಂ ಅಧಿಕಾರಿಗಳು ಇಲ್ಲದ ಕಾರಣಕ್ಕಾಗಿ ಸಮಯಕ್ಕೆ ಸರಿಯಾಗಿ ಅವಶ್ಯಕ ದಾಖಲೆಗಳನ್ನು | ಕೃಷ್ಣಾ ಮೇಲ್ದಂಡೆ ಯೋಜನೆಯ ಭೂಸ್ವಾಧೀನ ಹಾಗೂ ಪುನರ್ವಸತಿ ಮತ್ತು ಪುನರ್ ನಿರ್ಮಾಣಕ್ಕೆ ಸಂಬಂಧಿಸಿದಂತೆ ಪ್ರಾದೇಶಿಕ ಆಯುಕ್ತರು, ಬೆಳಗಾವಿ ಇವರಿಗೆ ಹೆಚ್ಚುವರಿಯಾಗಿ ಆಯುಕ್ತರು (ಕೃ.ಮೇ.ಯೋ), ಭೂಸ್ವಾಧೀನ ಹಾಗೂ ಪುನರ್ವಸತಿ ಮತ್ತು ಪುನರ್ ನಿರ್ಮಾಣ ಹುದ್ದೆಯ ಪ್ರಭಾರದಲ್ಲಿ ಇರಿಸಲಾಗಿದೆ. ವಿವಿಧ ಇಲಾಖೆಗಳಿಂದ ಅಧಿಕಾರಿ/ ನೌಕರರುಗಳನ್ನು ಎರವಲು ಆಧಾರದ ಮೇಲೆ ಭರ್ತಿ ಮಾಡಲಾಗುತ್ತಿರುವುದರಿಂದ, ಯಾವುದೇ ಅಭಿವೃದ್ಧಿ ಕಾಮಗಾರಿಗಳು ಕುಂಠಿತವಾಗದಂತೆ ಕ್ರಮ ವಹಿಸಲಾಗುತ್ತಿದೆ. |

<table>
<tr>
<td></td>
<td>(ಹಕ್ಕು ಪತ್ರ) ದೊರೆಯದೇ ಪುನರ್ವಸತಿ/ ಪುನರ್ ನಿರ್ಮಾಣ ಮಾಡಿಕೊಳ್ಳುವ ದಿಶೆಯಲ್ಲಿ ಅವರು ತೀವ್ರವಾದ ತೊಂದರೆ ಅನುಭವಿಸುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;</td>
<td rowspan="3">ಕೃಷ್ಣಾ ಮೇಲ್ದಂಡೆ ಯೋಜನೆಯಡಿ ಆಯುಕ್ತರು, ಪುನರ್ವಸತಿ ಮತ್ತು ಪುನರ್ ನಿರ್ಮಾಣ, ಭೂಸ್ವಾಧೀನ, ಬಾಗಲಕೋಟೆ ಇವರ ಕಚೇರಿ ಹಾಗೂ ಇವರ ಅಧೀನಕೊಳ್ಳಪಡುವ ಕಚೇರಿಗಳ ಹುದ್ದೆಗಳ ವಿವರ:
<table>
<tr><th>ಕ್ರ ಸಂ</th><th>ವೃಂದ</th><th>ಮಂಜೂರಾದ ಹುದ್ದೆಗಳ ಸಂಖ್ಯೆ</th><th>ಭರ್ತಿಯಾದ ಹುದ್ದೆಗಳ ಸಂಖ್ಯೆ</th><th>ಖಾಲಿ ಹುದ್ದೆಗಳ ಸಂಖ್ಯೆ</th></tr>
<tr><td>1.</td><td>ಗ್ರೂಪ್-ಎ</td><td>47</td><td>24</td><td>23</td></tr>
<tr><td>2.</td><td>ಗ್ರೂಪ್- ಬಿ</td><td>114</td><td>40</td><td>74</td></tr>
<tr><td>3.</td><td>ಗ್ರೂಪ್- ಸಿ</td><td>541</td><td>267</td><td>274</td></tr>
<tr><td>4.</td><td>ಗ್ರೂಪ್-ಡಿ</td><td>133</td><td>26</td><td>107</td></tr>
<tr><td></td><td>ಒಟ್ಟು</td><td>835</td><td>357</td><td>478</td></tr>
</table>
ಜಲಸಂಪನ್ಮೂಲ ಇಲಾಖೆಯಲ್ಲಿ 100 ಸಹಾಯಕ ಇಂಜಿನಿಯರ್ ಹಾಗೂ 300 ಕಿರಿಯ ಇಂಜಿನಿಯರ್ ಹುದ್ದೆಗಳನ್ನು ಭರ್ತಿ ಮಾಡುವ ಪ್ರಕ್ರಿಯೆಯು ಚಾಲ್ತಿಯಲ್ಲಿದ್ದು, ಸದರಿ ನೇಮಕಾತಿಗಳನ್ನು ಮಾಡುವ ಸಂದರ್ಭದಲ್ಲಿ ಕೃಷ್ಣಾ ಮೇಲ್ದಂಡೆ ಯೋಜನೆಗೂ ಸಹ ಅಗತ್ಯತೆಗನುಗುಣವಾಗಿ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು.</td>
</tr>
<tr>
<td>(ಇ)</td>
<td>ಈ ವಿಭಾಗದಲ್ಲಿ ಎಷ್ಟು ಮತ್ತು ಯಾವ ಯಾವ ಗ್ರೇಡ್ ಹುದ್ದೆಗಳು ಖಾಲಿ ಇವೆ ಎಂಬ ಸಂಪೂರ್ಣ ವಿವರ ನೀಡುವುದು:</td>
</tr>
<tr>
<td>(ಈ)</td>
<td>ಈ ಹುದ್ದೆಗಳನ್ನು ಖಾಯಂ ಆಗಿ ಭರ್ತಿ ಮಾಡುವುದು ಯಾವಾಗ?</td>
</tr>
</table>

ಸಂಖ್ಯೆ:ಜಸಂಇ 40 ಸೇಇಸಿ 2026

(ಡಿ.ಕೆ. ಶಿವಕುಮಾರ್)
ಉಪ ಮುಖ್ಯಮಂತ್ರಿ